ಯೋಜನೆಯಲ್ಲಿ ಸೌಕರ್ಯ ಪಡೆಯಲು ಕನಿಷ್ಠ 10 ಉದ್ಯಮಿಗಳನ್ನೊಳಗೊಂಡ ನೋಂದಾಯಿತ ಎಸ್.ಪಿ.ವಿ.ಗೆ ಅರ್ಹತೆ ಇರುತ್ತದೆ. ಆದ್ದರಿಂದ ಈ ಬಗ್ಗೆ ಕ್ರಮ ಉದ್ಭವಿಸುವುದಿಲ್ಲ.

ಈ) ಅನ್ವಯಿಸುವುದಿಲ್ಲ.

ಉ) ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ, ಪರಿಶೀಲಿಸಲಾಗುವುದು.

ರೇಷ್ಮೆ ಇಲಾಖೆಯ ಪುನರ್‌ರಚನೆ

34 (251) ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ) : ಮಾನ್ಯ ಸಣ್ಣ ಕೈಗಾರಿಕೆ ಹಾಗೂ ರೇಷ್ಮೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರೇಷ್ಮೆ ಇಲಾಖೆಯನ್ನು ಪುನರ್ ರಚನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಆ ಕುರಿತ ವಿವರಗಳೇನು;

ಆ) ರೇಷ್ಮೆ ವ್ಯವಸಾಯಕ್ಕೆ ಉತ್ತೇಜನ ನೀಡುವ ದಿಸೆಯಲ್ಲಿ ಸರ್ಕಾರದ ಪರಿಣಾಮಕಾರಿ ಕ್ರಮಗಳೇನು;

ಇ) ರೇಷ್ಮೆ ಉತ್ಪಾದನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇಲಾಖೆಯು ಹಮ್ಮಿಕೊಂಡ ಯೋಜನೆಗಳು ಯಾವುವು?

ಶ್ರೀ ವೆಂಕಟರಮಣಪ್ಪ (ಸಣ್ಣ ಕೈಗಾರಿಕೆ ಹಾಗೂ ರೇಷ್ಮೆ ಸಚಿವರು) :

ಅ) ಹೌದು.

ಪ್ರಸ್ತಾವನೆ ಸರ್ಕಾರದ ಮಟ್ಟದಲ್ಲಿ ಪರಿಶೀಲನಾ ಹಂತದಲ್ಲಿದೆ.

ಆ) ರೇಷ್ಮೆ ವ್ಯವಸಾಯವು ಗ್ರಾಮಾಂತರ ಪ್ರದೇಶಗಳ ರೈತರಿಗೆ ರೀಲರುಗಳಿಗೆ ಉದ್ಯೋಗ ಒದಗಿಸುತ್ತಿರುವ ಹಿನ್ನಲೆಯಲ್ಲಿ ಇದನ್ನು ಉತ್ತೇಜಿಸಲು ಸರ್ಕಾರವು ಫಲಾನುಭವಿ ಆಧಾರಿತ ಕಾರ್ಯಕ್ರಮಗಳಾದ ಕೇಂದ್ರ ರೇಷ್ಮೆ ಮಂಡಳಿಯ ಸಹಯೋಗದ ಕೆಟಲಿಟಿಕ್ ಅಭಿವೃದ್ಧಿ ಯೋಜನೆ, ರಾಜ್ಯ ಸರ್ಕಾರದ ರೇಷ್ಮೆ ವರದಾನ ಯೋಜನೆ, ವಿಶೇಷ ಘಟಕ ಯೋಜನೆ, ಗಿರಿಜನ ಉಪಯೋಜನೆ, ರೇಷ್ಮೆ ಸಾಕಾಣಿಕೆ ಅಭಿವೃದ್ಧಿ ಚಟುವಟಿಕೆ ಮತ್ತು ಜಿಲ್ಲಾ ವಲಯ ಕಾರ್ಯಕ್ರಮಗಳಡಿ ರೇಷ್ಮೆ ವ್ಯವಸಾಯದ ಚಟುವಟಿಕೆಗಳಿಗೆ ಸಹಾಯಧನ / ಪ್ರೋತ್ಸಾಹಧನ ಒದಗಿಸುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ ರೇಷ್ಮೆ ವ್ಯವಸಾಯ ಹೆಚ್ಚಿಸುವ ಕಾರ್ಯ ನಿರ್ವಹಿಸುತ್ತಿದೆ.

ಇ) ಕ್ರ.ಸಂ. ಆ. ದಲ್ಲಿ ನಮೂದಿಸಿರುವ ಕಾರ್ಯಕ್ರಮಗಳ ಪರಿಣಾಮಕಾರಿ ಅಳವಡಿಕೆಯಿಂದ 11ನೇ ಪಂಚವಾರ್ಷಿಕ ಯೋಜನೆಯ ಅಂತಿಮ ವರ್ಷ 2011–12ನೇ ಸಾಲಿನ ಅಂತ್ಯಕ್ಕೆ ರಾಜ್ಯದಲ್ಲಿ 1000 ಮೆ.ಟನ್ ದ್ವಿತಳಿ ರೇಷ್ಮೆ ಸೇರಿದಂತೆ ಒಟ್ಟು 11400 ಮೆ.ಟನ್ ರೇಷ್ಮೆ ಉತ್ಪಾದಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ರಾಜ್ಯದಲ್ಲಿ ಕೈಗಾರಿಕಾ ಸ್ಥಾಪನೆಗಾಗಿ ಭೂಸ್ವಾಧೀನಪಡಿಸಿಕೊಂಡಿರುವ ವಿವರಗಳು :

35 (252) ಶ್ರೀ ಹ್ಯಾರಿಸ್ ಎನ್.ಎ. (ಶಾಂತಿನಗರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಕಳೆದ 2 ವರ್ಷಗಳಲ್ಲಿ ಭೂಸ್ವಾಧೀನಪಡಿಸಿಕೊಂಡ ಜಮೀನುಗಳ ವಿವರ ನೀಡುವುದು.

ಆ) ಎಷ್ಟು ಬೃಹತ್ ಮತ್ತು ಮಧ್ಯಮ ವರ್ಗದ ಕೈಗಾರಿಕೆಗಳಿಗೆ ಸದರಿ ಭೂಮಿಯನ್ನು ಮಂಜೂರು ಮಾಡಲಾಗಿದೆ?

ಇ) ಭೂಮಿ ಹಂಚಿಕೆಯಾಗಿದ್ದರೂ ಕೈಗಾರಿಕೆಗಳನ್ನು ಪ್ರಾರಂಭಿಸದ ಉದ್ಯಮಿಗಳಿಂದ ನಿಯಮಗಳ ಪ್ರಕಾರ ಭೂಮಿಯನ್ನು ಹಿಂದಕ್ಕೆ ಪಡೆದುಕೊಳ್ಳಲಾಗಿದೆಯೇ? ಹಾಗಿದ್ದಲ್ಲಿ, ಆ ಕುರಿತಾದ ವಿವರಗಳೇನು?

ಶ್ರೀ ಮುರುಗೇಶ್ ಆರ್. ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕಳೆದ 2 ವರ್ಷಗಳಲ್ಲಿ ಕೈಗಾರಿಕಾ ಪ್ರದೇಶಗಳಿಗಾಗಿ ಮತ್ತು ಏಕಘಟಕ ಸಂಕೀರ್ಣಗಳಿಗೆ (ಅಂತಿಮ ಅಧಿಸೂಚನೆ ಕಲಂ 28(4) ರಡಿ ಹೊರಡಿಸಿ), ಒಟ್ಟು 8373–10 ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಳ್ಳಲಾಗಿದೆ. ವಿವರ ಈ ಕೆಳಕಂಡಂತಿದೆ: